**ಸಾಕ್ಷಿಯನ್ನು ದಿಃ 24.01.2023 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ ಎಸ್.ಎಂ. ವಕೀಲರಿಂದಃ**

ಈಗ ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ನ್ಯಾಯಾಲಯಕ್ಕೆ ಸಲ್ಲಿಸುತ್ತಿದ್ದೇನೆ. ಹಾಗೂ ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿರುತ್ತವೆ ಮತ್ತು ಸಂಗತಿಗಳು ಸತ್ಯವಾಗಿರುತ್ತವೆ ಮತ್ತು ನಾನು ಅದಕ್ಕೆ ಸಹಿಯನ್ನು ಹಾಕಿರುತ್ತೇನೆ.

ನಾನು ಕೆಲವೊಂದು ದಾಖಲೆಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನೋಡಿದರೆ ಗುರುತಿಸುತ್ತೇನೆ.

ಮೂಲ ಶುದ್ಧ ಕ್ರಯ ಪತ್ರವನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ನಿ ಪಿ 1 ಎಂದು ಗುರುತಿಸಲಾಯಿತು. 3 ಇ-ಖಾತಾಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ನಿ ಪಿ 2 ರಿಂದ 4 ಎಂದು ಗುರುತಿಸಲಾಯಿತು. ದಿನಾಂಕಃ30.09.2015 ಶುದ್ಧ ಕ್ರಯ ಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ ಪಿ 5 ಎಂದು ಗುರುತಿಸಲಾಯಿತು. ಕಂದಾಯ ರಶೀದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ ಪಿ 6 ಎಂದು ಗುರುತಿಸಲಾಯಿತು. ಡಿಮ್ಯಾಂಡ್ ರಿಜಿಸ್ಟರ್ ಎಕ್ಸ್ ಟ್ರಾಕ್ಟ್ ಅನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ ಪಿ 7 ಎಂದು ಗುರುತಿಸಲಾಯಿತು. ತೆರಿಗೆ ನಿರ್ಧರಣಾ ಪಟ್ಟಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ ಪಿ 8 ಎಂದು ಗುರುತಿಸಲಾಯಿತು. 2 ಟ್ಯಾಕ್ಸ್ ಅಸೆಸ್‌ಮೆಂಟ್ ಪಟ್ಟಿಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅವುಗಳನ್ನು ನಿ ಪಿ 9 ಮತ್ತು 10 ಎಂದು ಗುರುತಿಸಲಾಯಿತು. ಇನ್ನೊಂದು ಇ-ಖಾತಾವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ ಪಿ 11 ಎಂದು ಗುರುತಿಸಲಾಯಿತು. ಋಣಭಾರ ಪ್ರಮಾಣ ಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ ಪಿ 12 ಎಂದು ಗುರುತಿಸಲಾಯಿತು. ಕಂದಾಯ ರಶೀದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ ಪಿ 13 ಎಂದು ಗುರುತಿಸಲಾಯಿತು.

**ಆದ್ದರಿಂದ ದಾವೆಯಲ್ಲಿ ಕೋರಿದಂತೆ ಡಿಕ್ರಿ ಮಾಡಲು ವಿನಂತಿ.**

**ಪಾಟೀ ಸವಾಲುಃ ಶ್ರೀ ಎಸ್.ಆರ್.ಎಸ್. ವಕೀಲರಿಂದಃ**

ಪಾಟೀ ಸವಾಲಿಗಾಗಿ ವಕೀಲರು ಕಾಲಾವಕಾಶ ಕೋರಿದ್ದು, ಅದರಂತೆ ಕಾಲಾವಕಾಶ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ.)

ಓ ಹೇ ಕೇ ಸರಿ ಇದೆ.

**(ಅಜಿತ್ ದೇವರಮನಿ)**
**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,**
**ಬಂಗಾರಪೇಟೆ**